ಮಾರ್ಚ್-2022

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ಸ್ವಚ್ಛತಾವಾಣಿ

ವಾರ್ತಾಪತ್ರ

## "Regional Conference"



ಜಲ ಜೀವನ್ ಮಿಷನ್ ಹಾಗೂ ಸ್ವಚ್ಛ ಭಾರತ್ ಮಿಷನ್(ಗ್ರಾ) ಯೋಜನೆ ಕುರಿತು ದಕ್ಷಿಣ ಭಾರತದ ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳ ಪ್ರಾದೇಶಿಕ ಸಮ್ಮೇಳನವು ದಿನಾಂಕ: 05-03-2022 ರಂದು ಕೇಂದ್ರ ಜಲಶಕ್ತಿ ಮಂತ್ರಾಲಯದ ಸಚಿವರಾದ **ಶ್ರೀ ಗಜೇಂದ್ರ ಸಿಂಗ್ ಶೇಖಾವತ್** ನೇತೃತ್ವದಲ್ಲಿ ಬೆಂಗಳೂರಿನಲ್ಲಿ ನಡೆಯಿತು. ಪ್ರಾದೇಶಿಕ ಸಮ್ಮೇಳನದಲ್ಲಿ ರಾಜ್ಯದ ಮುಖ್ಯಮಂತ್ರಿಗಳಾದ **ಶ್ರೀ ಬಸವರಾಜ ಬೊಮ್ಮಾಯಿ** ಹಾಗೂ ಕ್ಯಾಬಿನೆಟ್ ಸಚಿವರಾದ **ಶ್ರೀ. ಅಶ್ವಥ್ ನಾರಾಯಣ್** ಸೇರಿದಂತೆ ಡಿ.ಡಿ.ಡಬ್ಲ್ಯು.ಎಸ್ ಕಾರ್ಯದರ್ಶಿ, ಭಾರತ ಸರ್ಕಾರ ಹಾಗೂ ಭಾರತ ಸರ್ಕಾರದ ಇತರೆ ಹಿರಿಯ ಅಧಿಕಾರಿಗಳು ಮತ್ತು ರಾಜ್ಯದ ಆರ್.ಡಿ.ಪಿ.ಆರ್ ಇಲಾಖೆಯ ಎಲ್ಲಾ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಈ ಸಮ್ಮೇಳನದಲ್ಲಿ ಆಂಧ್ರ ಪ್ರದೇಶದ ಪಂಚಾಯತ್ ರಾಜ್ ಇಲಾಖೆಯ ಸಚಿವರು, ತಮಿಳುನಾಡಿನ ಪಂಚಾಯತ್ ರಾಜ್ ಇಲಾಖೆಯ ಸಚಿವರು ಸೇರಿದಂತೆ, ಕೇರಳ, ತೆಲಂಗಾಣ, ಲಕ್ಷದ್ವೀಪ, ಪುದುಚೇರಿ ಮತ್ತು ಮಧ್ಯಪ್ರದೇಶ ರಾಜ್ಯಗಳ ಪಂಚಾಯತ್ ರಾಜ್ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.






## "ODF+ ಉತ್ತಮ ಅಭ್ಯಾಸಗಳ ಕುರಿತ ಕಾರ್ಯಾಗಾರ"




ದೇಶಾದ್ಯಂತ ಸ್ವಚ್ಛ ಭಾರತ್ ಮಿಷನ್(ಗ್ರಾ) ಹಂತ-2 ಜಾರಿಯಲ್ಲಿದ್ದು, ಪ್ರಸ್ತುತ ದೇಶವನ್ನು ಬಯಲು ಬಹಿರ್ದೆಸೆ ಮುಕ್ತ ದೇಶವೆಂದು ಘೋಷಿಸಿದ್ದು, ಇದೀಗ ದೇಶದ ಎಲ್ಲಾ ಹಳ್ಳಿಗಳನ್ನು ಸ್ವಚ್ಛ ಮತ್ತು ಸುಂದರ ಹಳ್ಳಿಗಳನ್ನಾಗಿಸುವ ನಿಟ್ಟಿನಲ್ಲಿ ಯೋಜನೆಯನ್ನು ಮುಂದಿನ ಹಂತಕ್ಕೆ ಕೊಂಡೊಯ್ಯಲಾಗಿದೆ. ದೇಶಾದ್ಯಂತ ಸ್ವಚ್ಛ ಭಾರತ್ ಮಿಷನ್(ಗ್ರಾ) ಹಂತ-2 ಜಾರಿಯಲ್ಲಿರುವುದರಿಂದ ದಿನಾಂಕ 26.3.2022 ರಂದು ನವದೆಹಲಿಯಲ್ಲಿ ಎಲ್ಲಾ ರಾಜ್ಯಗಳ "ODF+ ಉತ್ತಮ ಅಭ್ಯಾಸಗಳ ಕುರಿತ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು. ಕಾರ್ಯಾಗಾರಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿಗಳಾದ **ಶ್ರೀ.ಎಲ್.ಕೆ.ಅತೀಕ್**, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ನಿರ್ದೇಶಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಉಪ ಕಾರ್ಯದರ್ಶಿ(ಅಭಿವೃದ್ಧಿ) ಸೇರಿದಂತೆ ಇತರರು ಹಾಜರಾಗಿ ರಾಜ್ಯದಲ್ಲಿ ಸ್ವಚ್ಛ ಭಾರತ್ ಮಿಷನ್(ಗ್ರಾ), ಯೋಜನೆಯಡಿ ಆಗಿರುವ ಉತ್ತಮ ಕೆಲಸಗಳ ಬಗ್ಗೆ ಶಿಬಿರಾರ್ಥಿಗಳಿಗೆ ಮಾಹಿತಿ ನೀಡಿದರು.





## "World Water Day"

22ನೇ ಮಾರ್ಚ್ ಅನ್ನು ವಿಶ್ವದಾದ್ಯಂತ **World Water Day** ಯನ್ನಾಗಿ ಆಚರಿಸಲಾಗುತ್ತಿದ್ದು, ರಾಜ್ಯದಲ್ಲಿಯೂ ಈ ದಿನವನ್ನು ವಿಶೇಷವಾಗಿ ಎಲ್ಲಾ ಜಿಲ್ಲೆಗಳಲ್ಲಿ ಆಚರಿಸಲಾಯಿತು. ಕೆಲ ಜಿಲ್ಲೆಗಳಲ್ಲಿ ನೀರಿನ ಮಿತ ಬಳಕೆ ಸಂಬಂಧ ವಿಶೇಷ ಕಾರ್ಯಾಗಾರಗಳನ್ನು ಆಯೋಜನೆ ಮಾಡುವ ಮೂಲಕ ಸಾರ್ವಜನಿಕರಿಗೆ ನೀರಿನ ಮಿತಬಳಕೆ ಬಗ್ಗೆ ಜಾಗೃತಿ ಮೂಡಿಸಲಾಯಿತು. ಇನ್ನು ಕೆಲ ಜಿಲ್ಲೆಗಳಲ್ಲಿ ಗಿಡ ನೆಡುವ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ವಿಶ್ವ ನೀರಿನ ದಿನಾಚರಣೆಯನ್ನು ಆಚರಿಸಲಾಯಿತು.









ನೀರು ಮತ್ತು ನೈರ್ಮಲ್ಯಕ್ಕೆ ಸಂಬಂಧಪಟ್ಟ ಸಮಸ್ಯೆಗಳಿದ್ದಲ್ಲಿ ಕರೆ ಮಾಡಿ **9480985555**

ನಮ್ಮನ್ನು ಹಿಂಬಾಲಿಸಿ : swachhamevajayate.org rdpr.karnataka.gov.in